# ಕರ್ನಾಟಕ ವಿಧಾನ ಪರಿಷತ್

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 364 |
| ಸದಸ್ಯರ ಹೆಸರು | : | ಶ್ರೀ ಹೆಚ್.ಎಂ.ರಮೇಶ ಗೌಡ (ವಿಧಾನ ಸಭೆಯಿಂದ ಚುನಾಯಿತರಾದವರು) |
| ಉತ್ತರಿಸುವ ಸಚಿವರು | : | ಮಾನ್ಯ ಮುಖ್ಯಮಂತ್ರಿಗಳು |
| ಉತ್ತರಿಸಬೇಕಾದ ದಿನಾಂಕ | : | 10.12.2020 |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಶಾಸಕರುಗಳಿಗೆ ವಿಧಾನ ಸಭಾ ಮತ್ತು ವಿಧಾನ ಪರಿಷತ್ ಸದಸ್ಯರುಗಳಿಗೆ ಸ್ಥಳೀಯ ಪ್ರದೇಶಾಭಿವೃದ್ಧಿ ಯೋಜನೆಯಲ್ಲಿ ಪ್ರತಿ ವರ್ಷ ನೀಡುತ್ತಿರುವ ಅನುದಾನವೆಷ್ಟು; | ಕರ್ನಾಟಕ ಶಾಸಕರ ಸ್ಥಳೀಯ ಪ್ರದೇಶಾಭಿವೃದ್ಧಿ ಯೋಜನೆಯಲ್ಲಿ ಶಾಸಕರುಗಳಿಗೆ ವಿಧಾನ ಸಭಾ ಮತ್ತು ವಿಧಾನ ಪರಿಷತ್ ಸದಸ್ಯರುಗಳಿಗೆ ಪ್ರತಿ ವರ್ಷ ತಲಾ ರೂ.2.00 ಕೋಟಿಗಳ ಅನುದಾನವನ್ನು ನೀಡಲಾಗುತ್ತಿದೆ. |
| ಆ) | ಕಳೆದ ಮೂರು ವರ್ಷಗಳಿಂದ ಮಾನ್ಯ ಸದಸ್ಯರುಗಳಿಗೆ ಶಾಸಕರ ಸ್ಥಳೀಯ ಪ್ರದೇಶಾಭಿವೃದ್ಧಿ ನಿಧಿಗೆ ಎಷ್ಟು ಹಣ ಬಿಡುಗಡೆಯಾಗಿದೆ; ಸರ್ಕಾರ ನಿಗದಿಪಡಿಸಿರುವ ಹಣವೆಷ್ಟು; | ಕಳೆದ ಮೂರು ವರ್ಷಗಳಿಂದ ಮಾನ್ಯ ಸದಸ್ಯರುಗಳಿಗೆ ಶಾಸಕರ ಪ್ರದೇಶಾಭಿವೃದ್ಧಿ ಯೋಜನೆಯಡಿ ನಿಗದಿಯಾಗಿರುವ ಹಾಗೂ ಬಿಡುಗಡೆಯಾಗಿರುವ ಅನುದಾನದ ವಿವರಗಳು ಈ ಕೆಳಗಿನಂತಿವೆ:-<br>(ರೂ.ಕೋಟಿಗಳಲ್ಲಿ)<br>ಕ್ರ.ಸಂ / ವರ್ಷ / ನಿಗದಿಯಾಗಿರುವ ಅನುದಾನ / ಬಿಡುಗಡೆಯಾದ ಅನುದಾನ<br>1 / 2017-18 / 622.50 / 620.11<br>2 / 2018-19 / 600.00 / 462.99<br>3 / 2019-20 / 600.00 / 296.09 |
| ಇ) | 2019-20 ಹಾಗೂ 2020-21ನೇ ಸಾಲಿನ ಅಂತ್ಯದ ವೇಳೆ ಸಮೀಪಿಸಿದ್ದರೂ ನಿಗದಿಯಾದ ಅನುದಾನ ಬಿಡುಗಡೆಯಾಗದೇ ಇರುವುದಕ್ಕೆ ಕಾರಣವೇನು; ಈ ಕುರಿತು ಸರ್ಕಾರ ತೆಗೆದುಕೊಳ್ಳಲಿರುವ ಕ್ರಮಗಳೇನು; | ಆರ್ಥಿಕ ಇಲಾಖೆಯ ಆದೇಶದಂತೆ ಜಿಲ್ಲಾಧಿಕಾರಿಗಳ ಪಿ.ಡಿ.ಖಾತೆಯಲ್ಲಿನ ಆರಂಭಿಕ ಶಿಲ್ಕು ಮತ್ತು ಬಿಡುಗಡೆಯಾಗಿರುವ ಅನುದಾನ ಸೇರಿ ಒಟ್ಟಾರೆ ಲಭ್ಯವಿರುವ ಅನುದಾನದಲ್ಲಿ ಶೇ 75 ರಷ್ಟು ವೆಚ್ಚವಾಗದೇ ಇರುವುದರಿಂದ ಉಳಿದ ಕಂತುಗಳನ್ನು ಬಿಡುಗಡೆಮಾಡಿರುವುದಿಲ್ಲ. |
| ಈ) | ವಿಧಾನ ಪರಿಷತ್ ಸದಸ್ಯರುಗಳ ಹೆಚ್ಚಿನ ತಾಲ್ಲೂಕು ಮತ್ತು ಜಿಲ್ಲೆಗಳನ್ನು ಪ್ರತಿನಿಧಿಸುತ್ತಿರುವುದರಿಂದ ಇವರಿಗೆ ಅನುದಾನ ಹೆಚ್ಚಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ? | ಇಲ್ಲಾ |

ಸಂಖ್ಯೆ:ಪಿಡಿಎಸ್ 96 ಕೆಎಲ್ಎಸ್ 2020

(ಬಿ.ಎಸ್.ಯಡಿಯೂರಪ್ಪ)
ಮುಖ್ಯಮಂತ್ರಿ